ಸಾಕ್ಷಿಯನ್ನು ದಿನಾಂಕಃ 14-09-2023 ರಂದು ಕರೆದು ಪ್ರಮಾಣ ಮಾಡಿಸಲಾಯಿತು.

ಮುಖ್ಯ ವಿಚಾರಣೆ ಃ **ಶ್ರೀಮತಿ.ಎಸ್.ಬಿ.ಪಿ., ಅರ್ಜಿದಾರ ಪರ ವಕೀಲರಿಂದ ಃ**

**ಈ ದಿನ ನಾನು ನನ್ನ ಮುಖ್ಯ ವಿಚಾರಣೆ ಬದಲಿಗೆ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು ಅದರಲ್ಲಿ ಬರೆದಿರುವ ಸಂಗತಿಗಳು ಸರಿಯಾಗಿವೆ. ನಾನು ಈ ಅರ್ಜಿಯಲ್ಲಿ ಕೆಲವೊಂದು ದಾಖಲಾತಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನನ್ನ ಪರವಾಗಿ ನಿಶಾನೆಗಳೊಪಡಿಸುವ ಬಗ್ಗೆ ಮುಖ್ಯ ವಿಚಾರಣೆ ಇರುತ್ತದೆ.**

ನನ್ನ ಅರ್ಜಿಗೆ ಸಂಬಂಧಿಸಿದಂತೆ ನನ್ನ ಮತ್ತು ಎದುರುದಾರನ ಲಗ್ನದ 2 ಛಾಯಾಚಿತ್ರಿ ಹಾಜರುಪಡಿಸಿದ್ದು, ಅವುಗಳನ್ನು ನಿ.ಪಿ. 1 ಮತ್ತು 2 ಎಂದು ಗುರುತಿಸಲಾಯಿತು. ದಿಃ 26.10.2017 ರಂದು ಎದುರುದಾರನ ವಿರುದ್ಧ ಲೋಕಾಪೂರ ಪೋಲಿಸ ಠಾಣೆಯಲ್ಲಿ ನಾನು ನೀಡಿದ ಪಿರ್ಯಾದಿಯ ದೃಢೀಕೃತ ಪ್ರತಿ ಹಾಜರುಪಡಿಸಿದ್ದು ಅದನ್ನು ನಿ.ಪಿ. 3 ಎಂದು ಗುರುತಿಸಲಾಯಿತು. ದಿಃ 26.10.2017 ರ ಪ್ರಥಮ ವರ್ತಮಾನ ವರದಿಯ ದೃಢೀಕೃತ ಪ್ರತಿ ಹಾಜರುಪಡಿಸಿದ್ದು ಅದನ್ನು ನಿ.ಪಿ. 4 ಎಂದು ಗುರುತಿಸಲಾಯಿತು. ದಿಃ 05.08.2017 ರಂದು ಪೋಲಿಸ ಜಿಲ್ಲಾ ವರಿಷ್ಠಾಧಿಕಾರಿಗಳು ಬಾಗಲಕೋಟೆ ಇವರಿಗೆ ಎದುರುದಾರನ ವಿರುದ್ಧ ನೀಡಿದ ಪಿರ್ಯಾದಿಯ ದೃಢೀಕೃತ ಪ್ರತಿ ಹಾಜರುಪಡಿಸಿದ್ದು ಅದನ್ನು ನಿ.ಪಿ. 5 ಎಂದು ಗುರುತಿಸಲಾಯಿತು. ದಿಃ 02.08.2015 ರಂದು ಎದುರುದಾರನ ವಿರುದ್ಧ ಲೋಕಾಪೂರ ಪೋಲಿಸ ಠಾಣೆಯಲ್ಲಿ ನಾನು ನೀಡಿದ ಪಿರ್ಯಾದಿಯ ದೃಢೀಕೃತ ಪ್ರತಿ ಹಾಜರುಪಡಿಸಿದ್ದು ಅದನ್ನು ನಿ.ಪಿ. 6 ಎಂದು ಗುರುತಿಸಲಾಯಿತು. ದಿಃ 02.08.2015 ರ ಪ್ರಥಮ ವರ್ತಮಾನ ವರದಿಯ ದೃಢೀಕೃತ ಪ್ರತಿ ಹಾಜರುಪಡಿಸಿದ್ದು ಅದನ್ನು ನಿ.ಪಿ. 7 ಎಂದು ಗುರುತಿಸಲಾಯಿತು. ಶಿಶು ಅಭಿವೃದ್ಧಿ ಯೋಜನಾಧಿಕಾರಿ ಮುಧೋಳ ಇವರು ದಿಃ 01.02.2018 ರಂದು ಅರ್ಜಿದಾರರ ಪರವಾಗಿ ನ್ಯಾಯಾಲಯದಲ್ಲಿ ಕೌಟುಂಬಿಕ ದೌರ್ಜನ್ಯ ಕಾಯ್ದೆ ಯಡಿ ಪ್ರಕರಣ ದಾಖಲು ಮಾಡಿಕೊಳ್ಳುವ ಬಗ್ಗೆ ವಿನಂತಿ ಪತ್ರ ಹಾಜರುಪಡಿಸಿದ್ದು, ಅದನ್ನು ನಿ.ಪಿ. 8 ಎಂದು ಗುರುತಿಸಲಾಯಿತು. CDPO ಮುಧೋಳ ಇವರು ನೀಡಿದ ಗೃಹ ವೃತ್ತಾಂತ ವರದಿಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ. 9 ಎಂದು ಗುರುತಿಸಲಾಯಿತು. ಸದರಿ ಅರ್ಜಿಯ ನೋಟಿಸು ಎದುರುದಾರರಿಗೆ ಸರಬರಾಜು ಮಾಡಿದ ಸ್ವೀಕೃತಿ ಪ್ರತಿ ಮತ್ತು CDPO ರವರ ಪತ್ರ ದಿಃ 19.03.2018 ಹಾಜರುಪಡಿಸಿದ್ದು ಅವುಗಳನ್ನು ನಿ.ಪಿ. 10 ಮತ್ತು 11 ಎಂದು ಗುರುತಿಸಲಾಯಿತು. ಲೋಕಾಪೂರ ಗ್ರಾಮದ ಪಂಚಾಯತ ಮನೆ ಆಸ್ತಿ ನಂ.1687/2 ಎ, 1788/2 ಮತ್ತು 1877/1 ಎ ಇವುಗಳ ದೃಢೀಕೃತ ಪ್ರತಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿ.ಪಿ. 12 ರಿಂದ 14 ಎಂದು ಗುರುತಿಸಲಾಯಿತು. ಅರ್ಜಿದಾರ ನಂ.2 ಮತ್ತು 3 ರ ಶಾಲಾ ದಾಖಲಾತಿ ಪ್ರಮಾಣ ಪತ್ರ ಹಾಜರುಪಡಿಸಿದ್ದು ಅದನ್ನು ನಿ.ಪಿ. 15 ಎಂದು

ಗುರುತಿಸಲಾಯಿತು. ಆದ್ದರಿಂದ ನನ್ನ ಅರ್ಜಿಯಲ್ಲಿ ಕೇಳಿಕೊಂಡಂತೆ ಅರ್ಜಿಯನ್ನು ಪುರಸ್ಕರಿಸಲು ವಿನಂತಿ ಇರುತ್ತದೆ.

ಎದುರುದಾರ ಪರ ವಕೀಲರು ಪಾಟೀ ಸವಾಲಿಗೆ ಕಾಲಾವಕಾಶ ಕೋರಿದ್ದು, ಕಾಲಾವಕಾಶ ನೀಡಿ ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು )

ಓ ಹೇ ಕೇ ಸರಿ ಇದೆ.

ಹೆಚ್ಚುವರಿ ಜೆಎಂಎಫ್‌ಸಿ ಮುಧೋಳ.

ಸಾಕ್ಷಿಯ ಸಹಿ